ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

21

ಇಲಾಖೆ / ವಿಷಯ : DEPARTMENT / SUBJECT: ರಾಷ್ಟ್ರಪತಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE 29/3/21

## ದೆಹಲಿ ಮಸೂದೆಗೆ ರಾಷ್ಟ್ರಪತಿ ಅಂಕಿತ

ನವದೆಹಲಿ: ದೆಹಲಿ ಸರ್ಕಾರದ ಸತತ ವಿರೋಧದ ನಡುವೆಯೂ ಸಂಸತ್ತಿನಲ್ಲಿ ಮಂಡನೆಯಾಗಿ ಅಂಗೀಕಾರ ಪಡೆದಿದ್ದ 2021ರ ದ ಗವರ್ನಮೆಂಟ್ ಆಫ್ ನ್ಯಾಷನಲ್ ಟೆರಿಟರಿ ಆಫ್ ಡೆಲ್ಲಿ (ತಿದ್ದುಪಡಿ) ಮಸೂದೆಗೆ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಸಹಿ ಹಾಕಿದ್ದಾರೆ. ಇದರಿಂದ, ದೆಹಲಿ ಲೆಫ್ಟಿನೆಂಟ್ ಗವರ್ನರ್‌ಗೆ ಹೆಚ್ಚಿನ ಅಧಿಕಾರ ನೀಡುವ ಕಾನೂನು ಭಾನುವಾರದಿಂದಲೇ ಜಾರಿಯಾಗಿದೆ. ಈ ಹೊಸ ಕಾನೂನಿಂದಾಗಿ, ದೆಹಲಿ ರಾಜ್ಯ ಸರ್ಕಾರ ಯಾವುದೇ ಜನಪರ ಯೋಜನೆ ಜಾರಿಗೊಳಿಸುವ ಮೊದಲು ಅಥವಾ ಆಡಳಿತಾತ್ಮಕ ನಿರ್ಧಾರಗಳನ್ನು ಕೈಗೊಳ್ಳುವ ಮೊದಲು ಲೆಫ್ಟಿನೆಂಟ್ ಗವರ್ನರ್‌ರ ಸಮ್ಮತಿ ಪಡೆಯುವುದು ಕಡ್ಡಾಯವಾಗಲಿದೆ.